# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 788
2. ಮಾನ್ಯ ಸದಸ್ಯರ ಹೆಸರು : ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 10.03.2026
4. ಉತ್ತರಿಸುವ ಸಚಿವರು : ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಡ್ಯ ಮೈಶುಗರ್ ಸಕ್ಕರೆ ಕಾರ್ಖಾನೆಯಲ್ಲಿ 2025ನೇ ಸಾಲಿನಿಂದ 2026ನೇ ಸಾಲಿನವರೆಗೆ ರೈತರ ಎಷ್ಟು ಟನ್ ಕಬ್ಬನ್ನು ಕಾರ್ಖಾನೆಗೆ ತೆಗೆದುಕೊಳ್ಳಲಾಗಿದೆ; (ತಾಲ್ಲೂಕುವಾರು ವಿವರವಾದ ಪೂರ್ಣ ಮಾಹಿತಿ ನೀಡುವುದು); | ಮಂಡ್ಯ ಮೈಸೂರು ಸಕ್ಕರೆ ಕಾರ್ಖಾನೆಯು 2025-26ನೇ ಹಂಗಾಮಿನಲ್ಲಿ ಒಟ್ಟು 1,20,410.288 ಮೆ.ಟನ್ ಕಬ್ಬನ್ನು ರೈತರಿಂದ ಖರೀದಿಸಲಾಗಿದೆ.<br><br>ಮೈಸೂರು ಸಕ್ಕರೆ ಕಾರ್ಖಾನೆಗೆ ಮಂಡ್ಯ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ರೈತರ ಕಬ್ಬನ್ನು ಮಾತ್ರ ಸರಬರಾಜು ಮಾಡಿಕೊಂಡು ನುರಿಸಲಾಗಿದೆ. |
| (ಆ) | ಈ ಸಾಲಿನಲ್ಲಿ ಸಕ್ಕರೆ ಕಾರ್ಖಾನೆಗೆ ಕಬ್ಬನ್ನು ಸರಬರಾಜು ಮಾಡಿದ ರೈತರಿಗೆ ಪೂರ್ಣ ಪ್ರಮಾಣದಲ್ಲಿ ಹಣವನ್ನು ನೀಡಲಾಗಿದೆಯೇ; ನೀಡದಿದ್ದರೆ, ಇನ್ನು ಬಾಕಿ ಇರುವ ಮೊತ್ತ ಎಷ್ಟು; | ಮಂಡ್ಯದ ಮೈಸೂರು ಸಕ್ಕರೆ ಕಾರ್ಖಾನೆಗೆ 2025-26ನೇ ಹಂಗಾಮಿನಲ್ಲಿ ಕಬ್ಬು ಸರಬರಾಜು ಮಾಡಿರುವ ರೈತರಿಗೆ ಪೂರ್ಣವಾಗಿ ಕಬ್ಬು ಬಿಲ್ಲನ್ನು ಪಾವತಿಸಲಾಗಿದ್ದು, ಯಾವುದೇ ಬಾಕಿ ಇರುವುದಿಲ್ಲ. |
| (ಇ) | ಸಕ್ಕರೆ ಕಾರ್ಖಾನೆಗೆ ರೈತರು ಸರಬರಾಜು ಮಾಡಿದ ಕಬ್ಬಿನ ಬಾಕಿ ಬಿಲ್ಲುಗಳನ್ನು ಸರ್ಕಾರ ಯಾವ ದಿನಾಂಕದೊಳಗಾಗಿ ನೀಡಲು ಕ್ರಮ ಕೈಗೊಳ್ಳುವುದು? | ಮಂಡ್ಯದ ಮೈಸೂರು ಸಕ್ಕರೆ ಕಾರ್ಖಾನೆಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ಪೂರ್ಣವಾಗಿ ಕಬ್ಬು ಬಿಲ್ಲನ್ನು ಪಾವತಿಸಿರುವುದರಿಂದ ಸದರಿ ಪ್ರಶ್ನೆಯು ಉದ್ಭವಿಸುವುದಿಲ್ಲ. |

**ಸಂಖ್ಯೆ: ಸಿಐ 52 ಸಿಓಎಫ್ 2026**

**(ಶಿವಾನಂದ ಎಸ್ ಪಾಟೀಲ)**
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು